ಶ್ರೀ ಯು.ಟಿ.ಖಾದರ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಸರ್ಕಾರದ ಆದೇಶ ಸಂಖ್ಯೆ ಆಕುಕ 332 ಸಿಜಿಇ 2012 ದಿನಾಂಕ: 20.03.2013ರ ಕಾರ್ಯಕಾರಿ ಆದೇಶದಲ್ಲಿ ಅಂಕಿತಾ ಅಧಿಕಾರಿ ಹುದ್ದೆಗಳನ್ನು ಶೇ.50 ಭಾಗ ನೇರ ನೇಮಕಾತಿಯಿಂದ ಉಳಿದ 50 ಭಾಗ ಹಿರಿಯ ಆಹಾರ ಸುರಕ್ಷತಾ ಅಧಿಕಾರಿ ವೃಂದದಿಂದ ಬಡ್ತಿ ಮೂಲಕ ನೇಮಕಾತಿ ಮಾಡಲು ಅವಕಾಶ ಕಲ್ಪಿಸಿದೆ.

ಆ) ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆಯ ಅಡಿಯಲ್ಲಿ ರಾಜ್ಯದ ಎಲ್ಲಾ ಆಹಾರ ಪದಾರ್ಥಗಳ ವ್ಯವಹಾರಸ್ಥರು ದಿನಾಂಕ: 21.02.2014ರ ಒಳಗಾಗಿ ನೊಂದಣಿ/ಪರವಾನಿಗೆಯನ್ನು ಕಡ್ಡಾಯವಾಗಿ ಪಡೆಯಬೇಕಾಗಿದೆ ಅದಕ್ಕಾಗಿ ಈ ಅಂಕಿತಾ ಅಧಿಕಾರಿ ಹುದ್ದೆಗಳನ್ನು ನೇಮಕಾತಿ ಮೂಲಕ ಭರ್ತಿ ಮಾಡುವವರೆಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ 10 ವರ್ಷ ಸೇವೆಯನ್ನು ಪೂರೈಸಿರುವ ಅರ್ಹ ವೈದ್ಯಾಧಿಕಾರಿಗಳನ್ನು ನೀಯೋಜನೆಯ ಮೇಲೆ ನೇಮಿಸಲಾಗುತ್ತಿದೆ. ಇದರಲ್ಲಿ ಯಾವುದೇ ನಿಯಮಗಳನ್ನು ಉಲ್ಲಂಘಿಸಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಹೊಸದಾಗಿ ಪಡಿತರ ಚೀಟಿ ವಿತರಣೆ

874(1152); ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)

ಅ) ಬೀದರ್ ಜಿಲ್ಲೆಯ ಭಾಲ್ಕಿ ತಾಲ್ಲೂಕಿನಲ್ಲಿ ಹೊಸದಾಗಿ ಪಡಿತರ ಚೀಟಿಯನ್ನು ಪಡೆಯಲು ಎಷ್ಟು ಅರ್ಜಿಗಳು ಬಂದಿವೆ; ಅವುಗಳಲ್ಲಿ ಎಷ್ಟು ಪರಿಶೀಲಿಸಲಾದ, ವಿತರಿಸಲಾದ ಹಾಗೂ ಬಾಕಿಯಿರುವ ಅರ್ಜಿಗಳೆಷ್ಟು (ವಿವರ ನೀಡುವುದು);

ಆ) ಜಿಲ್ಲೆಯಲ್ಲಿ ಹೊಸದಾಗಿ ಪಡಿತರ ಚೀಟಿಯನ್ನು ವಿತರಿಸುವಲ್ಲಿ ಸಾಕಷ್ಟು ವಿಳಂಬವಾಗುತ್ತಿರುವುದರಿಂದ ಬಡ ಜನರು ತುಂಬಾ ತೊಂದರೆಯನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;